ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಿನಾಂಕ: 20–09–2019ರ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ ಕೈಗೊಳ್ಳಲು ಉದ್ದೇಶಿಸಿರುವ "Redesign and Upgrading of existing Musical Fountain interfaced with multimedia based laser and video projection on Aqua Screen at J.P Park ward no 17 under PACKAGE-2019-20 RRN-DIV-(08)" (ಅನುಬಂಧ–2ರ ಕ್ರ.ಸಂ.754) ಪ್ಯಾಕೇಜಿನ ಅಂದಾಜು ಮೊತ್ತ ರೂ.10.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20–09–2019.

2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆ/ಪಿ.ಆರ್/145/2021–22, ದಿನಾಂಕ: 08–09–2021.

3. ದಿನಾಂಕ: 08–10–2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 20–09–2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018–19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01–02–2019 ರಂತೆ ಅನುಮೋದಿಸಿದ್ದ, "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ"ಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ–2 ರ ಕ್ರಮ ಸಂಖ್ಯೆ: 754 ರ ಕಾಮಗಾರಿಗೆ ರೂ.10.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 08–09–2021ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2019, ದಿನಾಂಕ: 20–09–2019 ರಲ್ಲಿ ಅನುಮೋದನೆಯಾಗಿರುವ ಕ್ರಿಯಾ ಯೋಜನೆಯ ಅನುಬಂಧ–2ರ ಕ್ರಮ ಸಂಖ್ಯೆ: 754 ರಲ್ಲಿ "Redesign and Upgrading of existing Musical Fountain interfaced with multimedia based laser and video projection on Aqua Screen at J.P Park ward no 17" ಕಾಮಗಾರಿಗೆ ರೂ.10.00 ಕೋಟಿಗಳ ಅನುದಾನ ಲಭ್ಯವಿರುತ್ತದೆ. ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಳ ತಾಂತ್ರಿಕ ಮತ್ತು ಆರ್ಥಿಕ ಮೌಲ್ಯಮಾಪನ ಹಾಗೂ ದರಸಂಧಾನವನ್ನು ನಡೆಸಲಾಗಿರುತ್ತದೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

"Redesign and Upgrading of existing Musical Fountain interfaced with multimedia based laser and video projection on Aqua Screen at J.P Park ward no 17 under PACKAGE-2019-20 RRN-DIV-(08)" ಕಾಮಗಾರಿಗೆ ಟೆಂಡರ್ ಪ್ರಕಟಣೆ ಸಂಖ್ಯೆ: RRND/EE/Tend/03/2021-22, ದಿನಾಂಕ: 29–06–2021 ರಂತೆ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಿಟ್ಟ ಮೊತ್ತ ರೂ.8,35,95,778.15 ಗಳಾಗಿರುತ್ತದೆ. ಟೆಂಡರ್

. . .2/–

ಪ್ರಕಟಣೆಯನ್ನು "ವಿಜಯ ಕರ್ನಾಟಕ" ಮತ್ತು "ದಿ ಹಿಂದೂ" ದಿನಪತ್ರಿಕೆಗಳಲ್ಲಿ ದಿನಾಂಕ: 01-07-2021 ರಂದು ಪ್ರಕಟಿಸಲಾಗಿರುತ್ತದೆ. ಟೆಂಡರ್ ಸಲ್ಲಿಸಲು ಅಂತಿಮ ದಿನಾಂಕ: 22-07-2021 ಆಗಿರುತ್ತದೆ.

ದ್ವಿ-ಲಕೋಟೆ ತಾಂತ್ರಿಕ ಟೆಂಡರ್‌ನಲ್ಲಿ ಗುತ್ತಿಗೆದಾರರು ಸಲ್ಲಿಸಿರುವ ದಾಖಲೆಗಳನ್ವಯ ದಿನಾಂಕ: 12-08-2021ರ ತಾಂತ್ರಿಕ ಮೌಲ್ಯಮಾಪನ/ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನ ಸಮಿತಿ ಸಭೆಯ ತೀರ್ಮಾನದಂತೆ ಆರ್ಥಿಕ ಬಿಡ್ ಅನ್ನು ದಿನಾಂಕ: 17-08-2021 ರಂದು ತೆರೆಯಲಾಗಿದ್ದು ವಿವರಗಳು ಈ ಕೆಳಕಂಡಂತಿರುತ್ತದೆ ಎಂದು ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

| ಕ್ರ. ಸಂ. | ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು | ಟೆಂಡರ್‌ಗಿಟ್ಟ ಮೊತ್ತ (2018-19 ನೇ ಸಾಲಿನ ದರಪಟ್ಟಿ ಹಾಗೂ ಪರಿಷ್ಕೃತ ದರಗಳಂತೆ) | ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ ರೂ. ಗಳಲ್ಲಿ (2018-19 ನೇ ಸಾಲಿನ ದರಪಟ್ಟಿ ಹಾಗೂ ಪರಿಷ್ಕೃತ ದರಗಳಂತೆ) | ಟೆಂಡರ್‌ಗಿಟ್ಟ ಮೊತ್ತಕ್ಕೆ (2018-19ನೇ ಸಾಲಿನ ದರಪಟ್ಟಿ ಹಾಗೂ ಪರಿಷ್ಕೃತ ದರಗಳಂತೆ) ಹೋಲಿಸಿದಾಗ ಶೇಕಡಾವಾರು | ಷರಾ |
|---|---|---|---|---|---|
| 1. | ಶ್ರೀ ರಾಜೇಶ್ ಎಂ (ಶ್ರೀ ನಂಜುಂಡೇಶ್ವರ ಕನ್‌ಸ್ಟ್ರಕ್ಷನ್) | ರೂ.8,35,95,778.15 | ರೂ.9,36,27,354.72 | ಶೇ. 12.00% ಹೆಚ್ಚು | L-1 |
| 2. | ಶ್ರೀ ಪುರುಷೋತ್ತಮ್ ರಾಜು ಎನ್ (ನಾದಿಂಪಲ್ಲಿ ಪುರುಷೋತ್ತಮ್ ರಾಜು, ಎನ್.ಪಿ.ಆರ್ ಇನ್‌ಫ್ರಾಟೆಕ್) | | ರೂ.9,61,28,468.13 | ಶೇ. 14.99% ಹೆಚ್ಚು | L-2 |
| 3. | ಶ್ರೀ ದಾಮೋದರ್ ಮಂಜುನಾಥ್ (ಕೆ. ದಾಮೋದರ್ & ಕೋ.) | | ರೂ.9,82,31,315.70 | ಶೇ. 17.51% ಹೆಚ್ಚು | L-3 |

ಎಲ್-1 ಬಿಡ್‌ದಾರರಾದ ಶ್ರೀ ರಾಜೇಶ್ ಎಂ (ಶ್ರೀ ನಂಜುಂಡೇಶ್ವರ ಕನ್‌ಸ್ಟ್ರಕ್ಷನ್) ರವರು ನಮೂದಿಸಿರುವ ಮೊತ್ತ ರೂ.9,36,27,354.72 (ಶೇ.12% ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳನ್ನು ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇ.12.00% ರಷ್ಟು ಹೆಚ್ಚಿನ ದರವಾಗಿದ್ದ ಹಿನ್ನೆಲೆಯಲ್ಲಿ ಎಲ್-1 ಬಿಡ್‌ದಾರರಾದ ಶ್ರೀ ರಾಜೇಶ್ ಎಂ (ಶ್ರೀ ನಂಜುಂಡೇಶ್ವರ ಕನ್‌ಸ್ಟ್ರಕ್ಷನ್) ರವರೊಂದಿಗೆ ದರಸಂಧಾನ ಕೈಗೊಂಡು ಟೆಂಡರ್‌ನಲ್ಲಿ ನಮೂದಿಸಿರುವ ದರಗಳನ್ನು ಕಡಿಮೆ ಮಾಡಲು ಸೂಚಿಸಿದ್ದರ ಮೇರೆಗೆ ಬಿಡ್‌ದಾರರು ಹಾಲಿ ನಮೂದಿಸಿರುವ ರೂ.9,36,27,354.72 (ಶೇ.12% ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳ ಬದಲಾಗಿ ರೂ.8,77,58,847/- (ಶೇ.12% ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳಿಗೆ ಸಂಧಾನಿತ ದರ ಸಲ್ಲಿಸಿರುತ್ತಾರೆ. ಸದರಿ ಸಂಧಾನಿತ ದರ ಮೊತ್ತ ರೂ.8,77,58,847/- (ಶೇ.12% ಜಿ.ಎಸ್.ಟಿ ತೆರಿಗೆ ಹೊರತುಪಡಿಸಿ) ಗಳನ್ನು ಮಂಜೂರಾದ ದರಗಳಿಗೆ (2018-19ನೇ ಸಾಲಿನ ದರಪಟ್ಟಿ ಹಾಗೂ ಪರಿಷ್ಕೃತ ದರಗಳಂತೆ) ಹೋಲಿಸಿದಾಗ ಶೇ.4.98% ರಷ್ಟು ಹೆಚ್ಚುವರಿ ದರಗಳಾಗಿದ್ದು, ಸಂಧಾನಿತ ಟೆಂಡರ್ ಬಗ್ಗೆ ತೀರ್ಮಾನ ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಮಂಡಿಸುವುದು ಸೂಕ್ತವೆಂದು ಸರ್ವಾನುಮತದಿಂದ ತೀರ್ಮಾನಿಸಲಾಗಿರುತ್ತದೆ.

ಆದುದರಿಂದ, ಮೇಲ್ಕಂಡ ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಸಂಧಾನಿತ ಟೆಂಡರ್ ಮೊತ್ತಕ್ಕೆ ಅನುಮೋದನೆಗಾಗಿ ಸರ್ಕಾರದಿಂದ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಪ್ರಸ್ತಾವನೆ ಮಂಡಿಸಿರುವುದಾಗಿ ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

. . .3/-

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 08-10-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 08-09-2021ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ Redesign and Upgrading of existing Musicle Fountain interfaced with multimedia based laser and video projection on Aqua Screen at J.P.Park ward no 17 under PACKAGE-2019-20 RRN-DIV-(08) ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Rajesh M (Sri Nanjundeshwara Construction) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ. 8,35,95,778/- ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ. 8,44,31,736/- ಗಳಿಗೆ ಮಿತಿಗೊಳಿಸಿ ಅನುಮೋದಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ದಿನಾಂಕ: 08-10-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ನಅಇ 158 ಎಂಎನ್‌ವೈ 2021,**
**ಬೆಂಗಳೂರು, ದಿನಾಂಕ: 17-02-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಯ ಅನುಬಂಧ-7 ರ ಕ್ರಮ ಸಂಖ್ಯೆ: 754ರ ಕಾಮಗಾರಿಯನ್ನೊಳಗೊಂಡು ಮಾಡಲಾಗಿರುವ "Redesign and Upgrading of existing Musicle Fountain interfaced with multimedia based laser and video projection on Aqua Screen at J.P.Park ward no 17 under PACKAGE-2019-20 RRN-DIV-(08)" ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 08-10-2021 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Rajesh M (Sri Nanjundeshwara Construction) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.8,35,95,778-00 ಗಳಿಗೆ ಹೋಲಿಸಿದಾಗ 1.00% ಅಧಿಕ ಅಂದರೆ ರೂ.8,44,31,736-00 (ಎಂಟು ಕೋಟಿ ನಲವತ್ತ ನಾಲ್ಕು ಲಕ್ಷದ ಮೂವತ್ತೊಂದು ಸಾವಿರದ ಏಳುನೂರ ಮೂವತ್ತಾರು ರೂಪಾಯಿಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

**ಷರತ್ತುಗಳು:**

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.

. . .4/-

3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20–09–2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 08–10–2021ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

17/02

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.

. . .5/–

8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ–3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.